ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಗುರುವಾರ, ದಿನಾಂಕ: 18ನೇ ಜುಲೈ, 2019

ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆ ಹಾಗೂ ಕೊರತೆಯ ಕುರಿತು

ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) -

48 (538) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಜಲ, ಪವನ ಸೌರ, ಉಷ್ಣ (ಥರ್ಮಲ್) ಅಣುಶಕ್ತಿ ಮುಂತಾದ ಮೂಲಗಳಿಂದ ಒಟ್ಟು ಎಷ್ಟು ವಿದ್ಯುತ್ ಶಕ್ತಿ ಉತ್ಪಾದನೆಯಾಗುತ್ತಿದೆ ; (ಪ್ರತ್ಯೇಕ ವಿವರ ನೀಡುವುದು)

(ಆ) ಒಟ್ಟು ಉತ್ಪಾದನೆಯಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಹಾಗೂ ಕೃಷಿ ನೀರಾವರಿಗೆ ಎಷ್ಟು ಬಳಕೆಯಾಗುತ್ತಿದೆ ; ಅದರಂತೆ ವಾಣಿಜ್ಯ ಮತ್ತು ಗೃಹ ಬಳಕೆಗೆ ಎಷ್ಟು ಉಪಯೋಗವಾಗುತ್ತಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ವಿದ್ಯುತ್ ಕೊರತೆ ಇದೆಯೇ ; ಹಾಗಿದ್ದಲ್ಲಿ, ಅದನ್ನು ಯಾವ ರೀತಿ ನಿಭಾಯಿಸಲಾಗುತ್ತಿದೆ ; (ಮಾಹಿತಿ ನೀಡುವುದು)

(ಈ) ವಿವಿಧ ರೀತಿಯಲ್ಲಿ ಉತ್ಪಾದನೆಯಾಗುವ ವಿದ್ಯುತ್ ಶಕ್ತಿಯಲ್ಲಿ ಯಾವ ಮೂಲದ ಉತ್ಪಾದನೆ ನಿಭಾಯಿಸಲಾಗುತ್ತಿದೆ ; (ಮಾಹಿತಿ ನೀಡುವುದು)

(ಉ) ರೈತರ ನೀರಾವರಿ ಕೆಲಸಕ್ಕಾಗಿ ವಿದ್ಯುತ್ತಿನ ಕೊರತೆ ಇದೆ ಎಂಬ ರೈತರ ಕೂಗು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅದನ್ನು ಪರಿಹರಿಸಲು ಯಾವ ಕ್ರಮಕೈಗೊಳ್ಳಲಾಗಿದೆ ?